# ಯುವತಿಗೆ ರಕ್ಷಣೆ ನೀಡಲು ಸಿದ್ಧ: ಬೊಮ್ಮಾಯಿ

## ಜಾಗ ತಿಳಿಸಿದರೆ ಅಲ್ಲಿಗೇ ಹೋಗಿ ಹೇಳಿಕೆ ದಾಖಲು । ಸಿದ್ದು, ಡಿಕೆಶಿ ಬಳಿ ಏಕೆ ರಕ್ಷಣೆ ಕೇಳಿದಳೋ ಗೊತ್ತಿಲ್ಲ: ಸಚಿವ

• **ಕನ್ನಡಪ್ರಭ ವಾರ್ತೆ** ಬೆಂಗಳೂರು 26/3/21

ಮಾಜಿ ಸಚಿವರ ಸಿ.ಡಿ. ಪ್ರಕರಣಕ್ಕೆ ಸಂಬಂಧಿಸಿದಂತೆ ಯುವತಿಗೆ ಎಲ್ಲ ರೀತಿಯಲ್ಲೂ ರಕ್ಷಣೆ ನೀಡಲು ಸರ್ಕಾರ ಸಿದ್ಧವಿದೆ. ಆ ಯುವತಿ ಎಲ್ಲಿದ್ದಾಳೆ ಎಂಬುದನ್ನು ತಿಳಿಸಿದರೆ ಅವರ ಬಳಿಯೇ ಹೋಗಿ ಹೇಳಿಕೆಯನ್ನು ಪಡೆದುಕೊಳ್ಳಲಾಗುತ್ತದೆ ಎಂದು ಗೃಹ ಸಚಿವ ಬಸವರಾಜ ಬೊಮ್ಮಾಯಿ ತಿಳಿಸಿದ್ದಾರೆ.

ಗುರುವಾರ ನಗರದಲ್ಲಿ ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ಸಿ.ಡಿ. ಪ್ರಕರಣಕ್ಕೆ ಸಂಬಂಧಿಸಿದಂತೆ ಯಾರ ವಿರುದ್ಧ ಅಥವಾ ಪರ ತನಿಖೆ ನಡೆಯುತ್ತಿಲ್ಲ. ಸತ್ಯ ಹೊರ ಬರಬೇಕು ಎಂಬ ದೃಷ್ಟಿಯಿಂದ ಎಸ್ಐಟಿ (ವಿಶೇಷ ತನಿಖಾ ತಂಡ) ತನಿಖೆ ನಡೆಸುತ್ತಿದೆ.




ತನಿಖೆ ನಡೆಯುವಾಗ ಹಲವು ಬೆಳವಣಿಗೆಗಳು ನಡೆಯುತ್ತವೆ. ತಿರುವುಗಳು ಬರುತ್ತವೆ. ಅದಕ್ಕೆಲ್ಲ ಪ್ರತಿಕ್ರಿಯೆ ನೀಡಬೇಕಿಲ್ಲ. ಎಲ್ಲವನ್ನು ಸಕಾರಾತ್ಮಕವಾಗಿ ತೆಗೆದುಕೊಂಡು ತನಿಖೆ ನಡೆಸಲಾಗುವುದು. ಯಾರು ಏನೇ ಹೇಳಿದರೂ ನಿಷ್ಪಕ್ಷಪಾತವಾಗಿ ತನಿಖೆ ನಡೆಸುತ್ತಿದ್ದೇವೆ. ಆದಕ್ಕಾಗಿ ಮಾಜಿ ಸಚಿವ ರಮೇಶ್ ಜಾರಕಿಹೊಳಿ ಅವರ ವಿಚಾರಣೆ ಕೂಡ ನಡೆದಿದೆ ಎಂದು ಹೇಳಿದರು.

ಪ್ರಶ್ನೆಯೊಂದಕ್ಕೆ ಉತ್ತರಿಸಿದ ಅವರು, ಯುವತಿ ಎಸ್ಐಟಿ ಎದುರು ಹಾಜರಾದರೂ ಕೂಡ ಅವರಿಗೆ ರಕ್ಷಣೆ ನೀಡಲಾಗುವುದು. ಆಕೆಯ ಪೋಷಕರಿಗೂ ರಕ್ಷಣೆ ನೀಡಲಾಗುವುದು. ವಿಪಕ್ಷ ನಾಯಕ ಸಿದ್ದರಾಮಯ್ಯ ಮತ್ತು ಕೆಪಿಸಿಸಿ ಅಧ್ಯಕ್ಷ ಡಿ.ಕೆ. ಶಿವಕುಮಾರ್ ಅವರಿಗೆ ರಕ್ಷಣೆ ಕೊಡಿ ಎಂದು ಯುವತಿ ಏಕೆ ಮನವಿ ಮಾಡಿದ್ದಾರೋ ಗೊತ್ತಿಲ್ಲ. ಅದನ್ನು ಅವರೇ ಹೇಳಬೇಕು ಎಂದರು.

# ಯುವತಿಗಾಗಿ ಗೋವಾದಲ್ಲಿ 6 ತಿಂಗಳು ಹೋಟೆಲ್ ಬುಕ್!

## ಕೊಠಡಿ ಕಾದಿರಿಸಿದ್ದ ಕನಕಪುರದ ಗ್ರಾನೈಟ್ ಉದ್ಯಮಿ
## ಎಸ್ಐಟಿ ಕಾರ್ಯಾಚರಣೆ ಬೆನ್ನಲ್ಲೆ ಯುವತಿ ಬೇರೆಡೆಗೆ ಶಿಫ್ಟ್

**ಬೆಂಗಳೂರು:** ಮಾಜಿ ಸಚಿವರ ಸಿ.ಡಿ. ಪ್ರಕರಣದ ವಿವಾದಿತ ಯುವತಿಗೆ ಗೋವಾದಲ್ಲಿ ಆರು ತಿಂಗಳು ವಾಸ್ತವ್ಯ ಕಲ್ಪಿಸಲು ಸಿ.ಡಿ. ಸ್ಫೋಟದ ಗುಂಪು ಯೋಜಿಸಿತ್ತು ಎಂದು ತಿಳಿದು ಬಂದಿದೆ.



ಯುವತಿಯ ಆತಿಥ್ಯದ ಹೊಣೆಗಾರಿಕೆಯನ್ನು ಹೊತ್ತಿದ್ದ ಕನಕಪುರ ತಾಲೂಕಿನ ಗ್ರಾನೈಟ್ ಉದ್ಯಮಿ ಶಿವಕುಮಾರ್, ತನ್ನ ಮೇಲೆ ಪೊಲೀಸರಿಗೆ ಅನುಮಾನ ಬಾರದಂತೆ ಮುಂಜಾಗ್ರತೆ ವಹಿಸಿದ್ದ. ಹೀಗಾಗಿಯೇ ಯುವತಿಯ ಸ್ನೇಹಿತೆ ಹೆಸರಿನಲ್ಲಿ ಗೋವಾದ ಹೋಟೆಲ್‌ವೊಂದರಲ್ಲಿ ಕೊಠಡಿಯನ್ನು ಉದ್ಯಮಿ ಕಾಯ್ದಿರಿಸಿದ್ದ. ಆದರೆ ಗೋವಾದಲ್ಲಿ ಯುವತಿ ತಂಗಿರುವ ವಿಚಾರ ತಿಳಿದು ಎಸ್ಐಟಿ ಕಾರ್ಯಾಚರಣೆ ಶುರು ಮಾಡಿದ ಮಾಹಿತಿ ಪಡೆದ ಸಿ.ಡಿ. ಸ್ಫೋಟದ ಗುಂಪು, ರಾತ್ರೋರಾತ್ರಿ ಆಕೆಯನ್ನು ಅಲ್ಲಿಂದ ಬೇರೆಡೆ ಕರೆದೊಯ್ದಿದ್ದೆ ಎನ್ನಲಾಗಿದೆ. ಇನ್ನು ಯುವತಿಯ ಬಾಯ್ ಫ್ರೆಂಡ್ ಎನ್ನಲಾದ ಆಕಾಶ್ ತಲವಾಡೆ ಸಹ ಗೋವಾದಲ್ಲಿ ತಂಗಿದ್ದ ವಿಚಾರವನ್ನು ಎಸ್ಐಟಿ ಮುಂದೆ ಒಪ್ಪಿಕೊಂಡಿದ್ದಾನೆ. ಈ ಮಾಹಿತಿ ಹಿನ್ನೆಲೆಯಲ್ಲಿ ಹೊರ ರಾಜ್ಯದಲ್ಲಿ ತಲೆಮರೆಸಿಕೊಂಡಿರುವ ಗ್ರಾನೈಟ್ ಉದ್ಯಮಿ ಪತ್ತೆಗೆ ಬಿರುಸಿನ ಕಾರ್ಯಾಚರಣೆಯನ್ನು ಎಸ್ಐಟಿ ನಡೆಸಿದೆ ಎಂದು ತಿಳಿದು ಬಂದಿದೆ.

# ಸಿ.ಡಿ. ಸಂತ್ರಸ್ತೆ ಮನೆಗೆ ಮತ್ತೆ ನೋಟಿಸ್

**ವಿಜಯಪುರ:** ಸಿ.ಡಿ. ಪ್ರಕರಣಕ್ಕೆ ಸಂಬಂಧಿಸಿ ವಿಚಾರಣೆಗೆ ಹಾಜರಾಗುವಂತೆ ಸಿಸಿಬಿ ಪೊಲೀಸರು ಜಿಲ್ಲೆಯ ನಿಡಗುಂದಿ ಪಟ್ಟಣದಲ್ಲಿರುವ ಸಂತ್ರಸ್ತೆ ಮನೆಗೆ ಬುಧವಾರ ರಾತ್ರಿ ನೋಟಿಸ್ ಅಂಟಿಸಿ ಹೋಗಿದ್ದಾರೆ. ಮಾ.29ರಂದು ಸಿಸಿಬಿ ಕಚೇರಿಯ ಮಡಿವಾಳ ವಿಚಾರಣಾ ಕೇಂದ್ರಕ್ಕೆ ಹಾಜರಾಗಬೇಕು. ಬೆಂಗಳೂರಿನ ಆರ್.ಟಿ. ನಗರ ಠಾಣೆಯ ಪ್ರಕರಣಕ್ಕೆ ಸಂಬಂಧಿಸಿ ತಮ್ಮ ಹೇಳಿಕೆ ಪಡೆಯಬೇಕಿದೆ ಎಂದು ನೋಟಿಸ್‌ನಲ್ಲಿ ತಿಳಿಸಿದ್ದಾರೆ.

# ಯುವತಿಗೆ ರಕ್ಷಣೆ ನೀಡಲು ಹಿಂದೇಟು ಹಾಕಲ್ಲ: ಜೊಲ್ಲೆ

**ಬೆಂಗಳೂರು:** ಸಿ.ಡಿ. ಪ್ರಕರಣದ ತನಿಖೆಯ ವರದಿ ಏನೇ ಬಂದರೂ ಯುವತಿಗೆ ರಕ್ಷಣೆ ನೀಡಲು ಯಾವುದೇ ಹಿಂದೇಟು ಹಾಕುವುದಿಲ್ಲ ಎಂದು ಮಹಿಳಾ ಮತ್ತು ಮಕ್ಕಳ ಕಲ್ಯಾಣ ಸಚಿವೆ ಶಶಿಕಲಾ ಜೊಲ್ಲೆ ಸ್ಪಷ್ಟಪಡಿಸಿದ್ದಾರೆ.



ಗುರುವಾರ ಸುದ್ದಿಗಾರರ ಜತೆ ಮಾತನಾಡಿದ ಅವರು, ಹೊಸ ವಿಡಿಯೋದಲ್ಲಿ ಯುವತಿ ಏನು ಹೇಳಿದ್ದಾಳೆ ಎಂಬುದು ಗಮನಕ್ಕೆ ಬಂದಿಲ್ಲ. ಯುವತಿಗೆ ರಕ್ಷಣೆ ನೀಡುವುದಾಗಿ ಸದನದಲ್ಲಿಯೇ ತಿಳಿಸಲಾಗಿದೆ. ಗೃಹ ಸಚಿವರು ಮತ್ತು ಮುಖ್ಯಮಂತ್ರಿಗಳು ಆಕೆಗೆ ರಕ್ಷಣೆ ನೀಡುವುದಾಗಿ ಆಶ್ವಾಸನೆ ನೀಡಿದ್ದಾರೆ. ನಮ್ಮಿಂದ ರಕ್ಷಣೆ ನೀಡುವ ಕೆಲಸ ಮಾಡಲಾಗುವುದು. ಹೆಣ್ಣು ಮಗಳಿಗೆ ರಕ್ಷಣೆ ನೀಡುವುದು ನಮ್ಮ ಕರ್ತವ್ಯ. ಹೀಗಾಗಿ ನಮ್ಮ ಸರ್ಕಾರ ಯುವತಿಗೆ ರಕ್ಷಣೆ ನೀಡುವಲ್ಲಿ ಮುಂಚೂಣಿಯಲ್ಲಿರುತ್ತದೆ ಎಂದು ಹೇಳಿದರು.

ಮಹಿಳಾ ಇಲಾಖೆಯಿಂದ ರಕ್ಷಣೆ ಕೇಳಿದರೆ ನಮ್ಮ ಕಡೆಯಿಂದಲೂ ರಕ್ಷಣೆ ನೀಡಲು ಸಿದ್ಧ ಎಂದು ಹೇಳಿದರು.

# ಸೀಡಿ ಯುವತಿಗೆ ರಕ್ಷಣೆ ಸರ್ಕಾರದ ಕರ್ತವ್ಯ: ಡಿಕೆಶಿ

**ಬೆಂಗಳೂರು:** ಸಿ.ಡಿ. ಪ್ರಕರಣದ ಸಂತ್ರಸ್ತ ಯುವತಿಗೆ ರಕ್ಷಣೆ ನೀಡುವುದು ಹಾಗೂ ದೌರ್ಜನ್ಯವಾಗದಂತೆ ನೋಡಿಕೊಳುವುದು ರಾಜ್ಯ ಸರ್ಕಾರದ ಕರ್ತವ್ಯ ಎಂದು ಕೆಪಿಸಿಸಿ ಅಧ್ಯಕ್ಷ ಡಿ.ಕೆ. ಶಿವಕುಮಾರ್ ಹೇಳಿದ್ದಾರೆ.



ಸಂತ್ರಸ್ತ ಯುವತಿಯ ವಿಡಿಯೋವನ್ನು ನಾನು ನೋಡಿಲ್ಲ. ಯುವತಿಗೆ ರಕ್ಷಣೆ ನೀಡುವುದು ಸರ್ಕಾರದ ಕರ್ತವ್ಯ. ಉಳಿದಂತೆ ಯುವತಿ ಏನು ಹೇಳಿದ್ದಾರೆ ಎಂಬುದನ್ನು ತಿಳಿದುಕೊಂಡು ಪ್ರತಿಕ್ರಿಯಿಸುತ್ತೇನೆ ಎಂದು ಹೇಳಿದರು. ಇನ್ನು ತಮ್ಮ ಜೇಬಲ್ಲೂ ಬಾಂಬ್ ಇದೆ ಎಂಬ ರಮೇಶ್ ಜಾರಕಿಹೊಳಿ ಹೇಳಿಕೆಗೆ ಪ್ರತಿಕ್ರಿಯಿಸಿದ ಅವರು, ದಾಖಲೆಗಳನ್ನು ಬಿಡುಗಡೆ ಮಾಡುವುದು ಬೇಡ ಎಂದು ಹೇಳಿದವರು ಯಾರು? ಅದರಲ್ಲಿ ಶಾಕ್ ಆಗುವುದಾದರೂ ಇರಲಿ, ಏನಾದರೂ ಇರಲಿ. ಅವರಿಗೆ ಒಳ್ಳೆಯದಾಗಲಿ ಪಾಪ ಎಂದಷ್ಟೇ ಹೇಳಿದರು. ಜನಪ್ರತಿನಿಧಿ ನ್ಯಾಯಾಲಯದಲ್ಲಿ ಪ್ರಕರಣದ ವಿಚಾರಣೆ ಇತ್ತು. ಅದಕ್ಕೆ ಹಾಜರಾಗಿ ಈಗಷ್ಟೇ ಬಂದಿದ್ದೇನೆ ಎಂದರು.

ಕರ್ನಾಟಕ ವಿಧಾನ ಸಭೆ, ಸಂಶೋಧನಾ ಹಾಗೂ ಉಲ್ಲೇಖನಾ ಶಾಖೆ

**KARNATAKA LEGISLATIVE ASSEMBLY, RESEARCH AND REFERENCE BRANCH**

ಪತ್ರಿಕಾ ತುಣುಕುಗಳು

**PAPER CLIPPINGS**

20

ಇಲಾಖೆ / ವಿಷಯ : DEPARTMENT / SUBJECT: ಗೃಹ - ಸಿ.ಡಿ. ಪ್ರಕರಣ

ಪತ್ರಿಕೆಯ ಹೆಸರು : NAME OF THE NEWS PAPER: ಕನ್ನಡ ಪ್ರಭ    ದಿನಾಂಕ : DATE :26/3/2021


# ಸಿ.ಡಿ ಕೇಸ್: ಅಸಲಿ ವಿಡಿಯೋ ಪತ್ತೆ


« ಮೊದಲ ಪುಟದಿಂದ


ಈ ಅಸಲಿ ವಿಡಿಯೋದಲ್ಲಿ ಬೆಂಗಳೂರಿನ ಐಷಾರಾಮಿ ಅಪಾರ್ಟ್‌ಮೆಂಟ್‌ನ ಫ್ಲ್ಯಾಟ್‌ವೊಂದರಲ್ಲಿ ಮಾಜಿ ಸಚಿವರೊಂದಿಗೆ ವಿವಾದಿತ ಯುವತಿ ಕಳೆದಿದ್ದಾಳೆ ಎನ್ನಲಾದ ಖಾಸಗಿ ಕ್ಷಣಗಳು ಪತ್ತೆಯಾಗಿವೆ. ಅಲ್ಲದೆ ಸಿ.ಡಿ. ಸ್ಫೋಟ ತಂಡದ ಪ್ರಮುಖ ಸೂತ್ರಧಾರ ಎನ್ನಲಾದ ಖಾಸಗಿ ಸುದ್ದಿವಾಹಿನಿಯ ಪತ್ರಕರ್ತ ಶ್ರವಣ್ ಜತೆ ಯುವತಿಯ ಸಂಭಾಷಣೆ ತುಣುಕು ಕೂಡ ಸಿಕ್ಕಿದೆ. ಈ ಹಿನ್ನೆಲೆಯಲ್ಲಿ ಪೂರ್ವ ಯೋಜಿತವಾಗಿ ಮಾಜಿ ಸಚಿವರೊಂದಿಗೆ ಸಲುಗೆ ಬೆಳೆಸಿ ಬಳಿಕ ಅವರನ್ನು ಶಂಕಿತ ಆರೋಪಿಗಳು ಹನಿಟ್ರ್ಯಾಪ್ ಬಲೆಗೆ ಬೀಳಿಸಿರಬಹುದು ಎಂಬ ಶಂಕೆಯನ್ನು ಎಸ್‌ಐಟಿ ವ್ಯಕ್ತಪಡಿಸಿದೆ. ಈ ಅಸಲಿ ವಿಡಿಯೋವನ್ನು ಸಾಚಾತನದ ಪರೀಕ್ಷೆಗೆ ವಿಧಿ ವಿಜ್ಞಾನ ಪ್ರಯೋಗಾಲಯಕ್ಕೆ (ಎಫ್‌ಎಸ್‌ಎಲ್) ಅಧಿಕಾರಿಗಳು ಕಳುಹಿಸಿದ್ದಾರೆ ಎನ್ನಲಾಗಿದೆ.

ಬೆಂಗಳೂರಿನ ಶೇಷಾದ್ರಿಪುರದಲ್ಲಿರುವ ಖಾಸಗಿ ಜಾಹೀರಾತು ಸಂಸ್ಥೆಯೊಂದರ ಮೇಲೆ ಎಸ್‌ಐಟಿ ನಡೆಸಿದ ದಾಳಿ ವೇಳೆ ಲಭ್ಯವಾದ ಪೆನ್‌ಡ್ರೈವ್, ಲ್ಯಾಪ್‌ಟಾಪ್‌ಗಳು, ಹಾರ್ಡ್ ಡಿಸ್ಕ್ ಜಾಲಾಡಿದಾಗ ಅಸಲಿ ವಿಡಿಯೋ ಎಸ್‌ಐಟಿಗೆ ಸಿಕ್ಕಿದೆ ಎಂದು ಮೂಲಗಳು ಹೇಳಿವೆ. ಆದರೆ, ಎಸ್‌ಐಟಿ ಈ ಬಗ್ಗೆ ಅಧಿಕೃತ ಮಾಹಿತಿ ನೀಡಿಲ್ಲ.

**ಅಸಲಿ ವಿಡಿಯೋ ಬೆನ್ನತ್ತಿದ್ದ ಎಸ್‌ಐಟಿ:** ಮಾ.2ರಂದು ಮಾಜಿ ಸಚಿವರಿಗೆ ಸಂಬಂಧಿಸಿದೆ ಎನ್ನಲಾದ ಸಿ.ಡಿ. ಕುರಿತಾಗಿ ಬೆಂಗಳೂರು ನಗರ ಪೊಲೀಸ್ ಆಯುಕ್ತ ಕಮಲ್ ಪಂತ್ ಅವರಿಗೆ ರಾಮನಗರ ಜಿಲ್ಲೆ ಕನಕಪುರ ತಾಲೂಕಿನ ಸಾಮಾಜಿಕ ಕಾರ್ಯಕರ್ತ ದಿನೇಶ್ ಕಲ್ಲಹಳ್ಳಿ ಸಿ.ಡಿ. ಸಮೇತ ದೂರು ನೀಡಿದ್ದರು. ಇದಾದ ಕೆಲವೇ ಕ್ಷಣಗಳಲ್ಲಿ ಸಾಮಾಜಿಕ ಜಾಲತಾಣ ಹಾಗೂ ಮಾಧ್ಯಮಗಳಲ್ಲಿ ಮಾಜಿ ಸಚಿವರಿಗೆ ಸೇರಿದ್ದು ಎನ್ನಲಾದ ಐದಾರು ನಿಮಿಷದ ಲೈಂಗಿಕತೆಗೆ ಸಂಬಂಧಿಸಿದ ಎರಡು ವಿಡಿಯೋಗಳು ವೈರಲ್ ಆಗಿದ್ದವು.

ಇದರಲ್ಲಿ ಮುಖ ಮರೆಮಾಚಲಾಗಿದ್ದ ಯುವತಿ ಜತೆ ಮಾಜಿ ಸಚಿವರ ರಾಜಕಾರಣದ ಮಾತುಕತೆಯೂ ರಾಜಕೀಯ ವಲಯದಲ್ಲಿ ಭಾರಿ ಸಂಚಲನ ಮೂಡಿಸಿತ್ತು. ಆದರೆ ಈ ವಿಡಿಯೋ ಬಹಿರಂಗ ಬೆನ್ನಲ್ಲೇ ಸಚಿವ ಸ್ಥಾನ ತೊರೆದ ಅವರು, ನನ್ನ ರಾಜಕೀಯ ಏಳಿಗೆ ಸಹಿಸಲಾಗದ ಷಡ್ಯಂತ್ರ ರೂಪಿಸಲಾಗಿದೆ. ಅದೊಂದು ನಕಲಿ ಸಿ.ಡಿ. ಆಗಿದ್ದು, ನಾನು ತಪ್ಪು ಮಾಡಿಲ್ಲ ಎಂದಿದ್ದರು.

ಇತ್ತ ಮಾಜಿ ಸಚಿವರ ಲೈಂಗಿಕ ಹಗರಣದ ತನಿಖೆ ಆರಂಭಿಸಿದ ಎಸ್‌ಐಟಿ ಅಧಿಕಾರಿಗಳು, ಅಸಲಿ ವಿಡಿಯೋ ಪತ್ತೆಗೆ ಸಿ.ಡಿ. ಪ್ರಕರಣದಲ್ಲಿ ಹೆಸರು ಪ್ರಸ್ತಾಪವಾಗಿರುವ ಪತ್ರಕರ್ತರು, ಗ್ರಾನೈಟ್ ಉದ್ಯಮಿ ಮನೆ, ವಿವಾದಿತ ಯುವತಿ ಕೊಠಡಿ ಹಾಗೂ ಆಕೆಯ ಸ್ನೇಹಿತರ ಮನೆ, ಶೇಷಾದ್ರಿಪುರದಲ್ಲಿರುವ ಖಾಸಗಿ ಜಾಹೀರಾತು ಸಂಸ್ಥೆಯೊಂದರ ಮೇಲೂ ಎಸ್‌ಐಟಿ ದಾಳಿ ನಡೆಸಿತ್ತು.

**ಅಪಾರ್ಟ್‌ಮೆಂಟ್‌ನಲ್ಲಿ ಖಾಸಗಿ ಕ್ಷಣಗಳು:** ಬೆಂಗಳೂರು ನಗರದ ಉತ್ತರ ದಿಕ್ಕಿನಲ್ಲಿರುವ ಐಷಾರಾಮಿ ಅಪಾರ್ಟ್‌ಮೆಂಟ್‌ನ ಫ್ಲ್ಯಾಟ್‌ನಲ್ಲಿ ವಿವಾದಿತ ಯುವತಿಯೊಂದಿಗೆ ಮಾಜಿ ಸಚಿವರು ಖಾಸಗಿ ಕ್ಷಣಗಳನ್ನು ಕಳೆದಿದ್ದರು. ಆ ವೇಳೆ ವ್ಯಾನಿಟಿ ಬ್ಯಾಗ್‌ನಲ್ಲಿ ಆಕೆ ರಹಸ್ಯ ಕ್ಯಾಮೆರಾ ಇಟ್ಟು, ಚಿತ್ರೀಕರಿಸಿಕೊಂಡಿದ್ದಳು. ಈ ವೇಳೆ ಅಪಾರ್ಟ್‌ಮೆಂಟ್ ಹತ್ತಿರದಲ್ಲೇ ಪತ್ರಕರ್ತ ಶ್ರವಣ್ ಇದ್ದ ಎನ್ನಲಾಗಿದೆ. ಈ ಭೇಟಿ ಬಳಿಕ ಫ್ಲ್ಯಾಟ್‌ನಿಂದ ಹೊರಬಂದ ಯುವತಿ, ತಕ್ಷಣವೇ ಶ್ರವಣ್‌ಗೆ ಅಂದುಕೊಂಡಂತೆ ಕೆಲಸ ಮುಗಿದಿದೆ ಎಂದು ಹೇಳಿ ಕ್ಯಾಮೆರಾ ಹಸ್ತಾಂತರಿಸಿದ್ದ ವಿಡಿಯೋ ಪತ್ತೆಯಾಗಿವೆ ಎನ್ನಲಾಗಿದೆ.